# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು-ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಪ್ರದೇಶ ಯೋಜನಾ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಲಾದ ಪ್ರಸ್ತಾಪಿತ ರಸ್ತೆ ಪರಿಚಲನಾ ಜಾಲದ ನಕ್ಷೆಗಳಿಗೆ (Road Network Grid Plan) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ13(1) ರಡಿಯಲ್ಲಿ ಸರ್ಕಾರದಿಂದ ತಾತ್ಕಾಲಿಕ ಅನುಮೋದನೆ ನೀಡುವ ಕುರಿತು.

ಉಲ್ಲೇಖ:
1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ: 11.05.2025 ಮತ್ತು 18.05.2025 ರಂದು ನಡೆದ ಸಭೆಯ ನಡವಳಿಗಳು.
2. ಸರ್ಕಾರದ ಆದೇಶ ಸಂಖ್ಯೆ: ನಅಇ 75 ಬೆಂರೂಪ್ರಾ 2003, ದಿನಾಂಕ 12.02.2004.
3. ಸದಸ್ಯ ಕಾರ್ಯದರ್ಶಿ, ಬೆಂಗಳೂರು-ಮೈಸೂ ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಪ್ರದೇಶ ಯೋಜನಾ ಪ್ರಾಧಿಕಾರ ಇವರ ಪತ್ರ ಸಂಖ್ಯೆ: ಬಿಎಂಐಸಿಎಪಿಎ/ರಸ್ತೆ ಪರಿಚಲನಾ ಜಾಲ-01/2026-27/895, ದಿನಾಂಕ 07.09.2026.

********

**<u>ಪ್ರಸ್ತಾವನೆ</u>**

ಮೇಲೆ ಓದಲಾದ ಉಲ್ಲೇಖ (1) ರ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಗಳಲ್ಲಿ ಬೆಂಗಳೂರು-ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಪ್ರದೇಶ ಯೋಜನಾ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದಲ್ಲಿ ರಸ್ತೆ ಪರಿಚಲನೆಯನ್ನು (Road Network Grid) ಪ್ರಸ್ತಾಪಿಸಿ ಸರ್ಕಾರದ ಅನುಮೋದನೆಗೆ ಸಲ್ಲಿಸುವಂತೆ ನಿರ್ದೇಶನ ನೀಡಲಾಗಿರುತ್ತದೆ.

ಮೇಲೆ ಓದಲಾದ ಉಲ್ಲೇಖ (2) ರಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3) ರಡಿ ಬೆಂಗಳೂರು-ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಪ್ರದೇಶ ಯೋಜನಾ ಪ್ರದೇಶದ ಮಹಾಯೋಜನೆಗೆ ಅಂತಿಮ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಉಲ್ಲೇಖ (3) ರಲ್ಲಿ ಬೆಂಗಳೂರು-ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಪ್ರದೇಶ ಯೋಜನಾ ಪ್ರಾಧಿಕಾರದ ವ್ಯಾಪ್ತಿಯಲ್ಲಿ 140 ಪೂರ್ಣ ಗ್ರಾಮಗಳು, 54 ಭಾಗಶಃ ಗ್ರಾಮಗಳು ಹಾಗೂ ಮದ್ದೂರು ಪಟ್ಟಣವು ಸೇರಿದ್ದು, 70115.ಕಿ.ಮೀ ವ್ಯಾಪ್ತಿಯ ಸ್ಥಳೀಯ ಯೋಜನಾ ಪ್ರದೇಶವನ್ನು ಹೊಂದಿರುವುದಾಗಿ ಹಾಗೂ ಬೆಂಗಳೂರು-ಮೈಸೂರು ಕಾರಿಡಾರ್‌ಗೆ ಅನುಗುಣವಾಗುವ ಪ್ರದೇಶಕ್ಕೆ ಸ್ಥಳೀಯ ಯೋಜನಾ ಪ್ರದೇಶ ಘೋಷಿಸಿದ್ದು, ಸದರಿ ಸ್ಥಳೀಯ ಯೋಜನಾ ಪ್ರದೇಶವು LINEAR ಆಗಿದ್ದು, ಸ್ಥಳೀಯ ಯೋಜನಾ ಪ್ರದೇಶದಲ್ಲಿ ಮದ್ದೂರು ಪೂರ್ಣ ನಗರ/ಪಟ್ಟಣ ಬರುತ್ತಿದ್ದು, ಸದರಿ ಪಟ್ಟಣಕ್ಕೆ ರಸ್ತೆ ಪರಿಚಲನಾ ಜಾಲದ ನಕ್ಷೆಯನ್ನು ಪ್ರತ್ಯೇಕವಾಗಿ ಹಾಗೂ ಸ್ಥಳೀಯ ಯೋಜನಾ ಪ್ರದೇಶಕ್ಕೆ ಪ್ರತ್ಯೇಕವಾಗಿ ರಸ್ತೆ ಪರಿಚಲನಾ ಜಾಲದ ನಕ್ಷೆಯನ್ನು ತಯಾರಿಸಿರುವುದಾಗಿ ವರದಿ ನೀಡಲಾಗಿದೆ.

ಅದರಂತೆ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 12(1) (ಬಿ) ರನ್ವಯ ಕ್ರಮವಹಿಸಿ ತಯಾರಿಸಿರುವ ರಸ್ತೆ ಪರಿಚಲನಾ ಜಾಲದ (Road Network Grid Plan) ನಕ್ಷೆಗಳನ್ನು ಅನುಮೋದಿತ ಮಹಾಯೋಜನೆಯಲ್ಲಿ ಅಳವಡಿಸಿಕೊಳ್ಳಲು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13(1) ರನ್ವಯ ತಾತ್ಕಾಲಿಕ ಅನುಮೋದನೆ ನೀಡುವ ಸಂಬಂಧ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 454 ಎಂಎನ್‌ಐ 2026(ಇ), ಬೆಂಗಳೂರು**
**ದಿನಾಂಕ: 09.09.2026**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು-ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಪ್ರದೇಶ ಯೋಜನಾ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯೊಳಗೆ ಪ್ರಸ್ತಾಪಿಸಲಾದ GIS ಆಧಾರಿತ ರಸ್ತೆ ಪರಿಚಲನಾ ಜಾಲವನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 12(1)(ಬಿ) ರನ್ವಯ ಅಳವಡಿಸಿಕೊಳ್ಳಲು ಪ್ರಸ್ತಾಪಿತ ರಸ್ತೆ ಪರಿಚಲನಾ ಜಾಲದ ನಕ್ಷೆಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13(1) ರನ್ವಯ ಈ ಕೆಳಕಂಡ ಷರತ್ತುಗಳಿಗೊಳಪಟ್ಟು, ಸರ್ಕಾರದ ತಾತ್ಕಾಲಿಕ ಅನುಮೋದನೆಯನ್ನು ನೀಡಲಾಗಿದೆ.

1. ಪ್ರಸ್ತಾಪಿಸಿರುವ ರಸ್ತೆ ಪರಿಚಲನೆಯು ಚಾಲ್ತಿಯಲ್ಲಿರುವ ಅನುಮೋದಿತ ಮಹಾಯೋಜನೆಯ ಹಾಲಿ ಮತ್ತು ಪ್ರಸ್ತಾಪಿತ ರಸ್ತೆಗಳೊಂದಿಗೆ ಯೋಜನಾಬದ್ಧವಾಗಿ ಜೋಡಣೆಯಾಗಿರುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು.
2. ಪ್ರಸ್ತಾಪಿಸಲಾದ ರಸ್ತೆ ಪರಿಚಲನೆಯು ಸ್ಥಳೀಯ ಯೋಜನಾ ಪ್ರದೇಶದ ಹೊರಭಾಗದಲ್ಲಿ ಹೊಂದಿಕೊಂಡಂತೆ ಇರುವ ಇತರೆ ಯೋಜನಾ ಪ್ರಾಧಿಕಾರಗಳ ಪ್ರಸ್ತಾಪಿತ ರಸ್ತೆ ಜಾಲಗಳೊಂದಿಗೆ ಹೊಂದಾಣಿಕೆಯಾಗುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು.
3. ಸದರಿ ಪ್ರಸ್ತಾವನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13(3) ರನ್ವಯ ಸರ್ಕಾರದ ಅಂತಿಮ ಅನುಮೋದನೆ ಪಡೆದು ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಅಭಿವೃದ್ಧಿಗಳಿಗೆ ಅನುಮತಿಸುವಾಗ ಪ್ರಸ್ತಾಪಿತ ರಸ್ತೆ ಜಾಲವನ್ನು ಅಳವಡಿಸಿಕೊಂಡು ಅನುಮೋದನೆಗಳನ್ನು ನೀಡತಕ್ಕದ್ದು.

ಪ್ರಸ್ತಾಪಿತ ರಸ್ತೆ ಪರಿಚಲನಾ ನಕ್ಷೆಗಳಿಗೆ ಅನುಮೋದನೆ ನೀಡಿದ ಗುರುತಾಗಿ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಬೆಂಗಳೂರು-ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಪ್ರದೇಶ ಯೋಜನಾ ಪ್ರಾಧಿಕಾರವು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13(1)(2) ರನ್ವಯ ಕ್ರಮ ಕೈಗೊಂಡು ಪ್ರಸ್ತಾಪಿತ ರಸ್ತೆ ಪರಿಚಲನಾ ಜಾಲದ ನಕ್ಷೆಗಳನ್ನು ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

**(ರಾಜೇಶ್ ಎಸ್. ಸೂಳಿಕೇರಿ)**
ಸರ್ಕಾರದ ಅಧೀನ ಕಾರ್ಯದರ್ಶಿಗಳು,
ನಗರಾಭಿವೃದ್ಧಿ ಇಲಾಖೆ
(ಬಿ.ಡಿ.ಎ ಮತ್ತು ಬೆಂ-1)

**PR-330**

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59.